# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **696**

ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : 12-03-2025

| | ಪ್ರಶ್ನೆ | ಉತ್ತರ |
|---|---|---|
| ಅ. | ಈ ಹಿಂದೆ ಸಿಂಧನೂರಿಗೆ ಸರ್ಕಾರವು ಪ್ರಾದೇಶಿಕ ಸಾರಿಗೆ ಕಚೇರಿ ಮಂಜೂರು ಮಾಡಲಾಗಿತ್ತೇ; | ಮಂಜೂರು ಮಾಡಿರಲಿಲ್ಲ. |
| ಆ. | ಇಲ್ಲದಿದ್ದಲ್ಲಿ, ಸಿಂಧನೂರು ತಾಲ್ಲೂಕಿನಲ್ಲಿ ಪ್ರಾದೇಶಿಕ ಸಾರಿಗೆ ಕಚೇರಿಯನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ಹೊಸದಾಗಿ ಪ್ರಾದೇಶಿಕ ಸಾರಿಗೆ ಕಛೇರಿಯನ್ನು ತೆರೆಯುವ ಸಂಬಂಧದ ಪ್ರಸ್ತಾವನೆಯನ್ನು ಪ್ರಸ್ತುತ ಹೆಚ್ಚುವರಿ ಹಣಕಾಸು ಬಾದ್ಯತೆಯನ್ನು ಭರಿಸಲು ಅವಕಾಶವಿರವುದಿಲ್ಲ.<br><br>ಅಲ್ಲದೇ ಸಾರಿಗೆ ಇಲಾಖೆಯಲ್ಲಿ 45 ಸೇವೆಗಳನ್ನು Contactless, Faceless and Online ಮೂಲಕ ಒದಗಿಸಲಾಗುತ್ತಿದ್ದು, ಇದರಿಂದಾಗಿ ಸಾರ್ವಜನಿಕರು ಆನ್‌ಲೈನ್ ಸೌಲಭ್ಯವನ್ನು ಸಂಪರ್ಕರಹಿತವಾಗಿ ತಾವು ಇದ್ದಲ್ಲಿಯೇ ಬಳಸಿಕೊಳ್ಳಬಹುದಾಗಿದ್ದು, ಪ್ರಾದೇಶಿಕ ಸಾರಿಗೆ ಕಛೇರಿಗೆ ಭೇಟಿ ನೀಡುವ ಅವಶ್ಯಕತೆ ಇರುವುದಿಲ್ಲ.<br><br>ಮೇಲ್ಕಂಡ ಹಿನ್ನೆಲೆಯಲ್ಲಿ, ಪ್ರಸ್ತುತ ಸಿಂಧನೂರು ತಾಲ್ಲೂಕಿನಲ್ಲಿ ಹೊಸದಾಗಿ ಪ್ರಾದೇಶಿಕ ಸಾರಿಗೆ ಕಛೇರಿಯನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |
| ಇ. | ಸದರಿ ತಾಲ್ಲೂಕಿನ ಹೋಬಳಿ ಕೇಂದ್ರಗಳಾದ ಜವಳಗೇರಿ, ದಡೆಸಗೂರು, ಗಾಂಧಿನಗರಗಳಲ್ಲಿ ಹತ್ತು ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಇದ್ದು, ಸದರಿ ಊರುಗಳಲ್ಲಿ ಸಾರಿಗೆ ಬಸ್ಸು ನಿಲ್ದಾಣಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಇದೆಯೇ; | ಸಿಂಧನೂರು ತಾಲ್ಲೂಕಿನ ಹೋಬಳಿ ಕೇಂದ್ರಗಳಾದ ಜವಳಗೇರಾ, ದಡೆಸುಗೂರು ಮತ್ತು ಗಾಂಧಿನಗರಗಳಲ್ಲಿ ಬಸ್ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆ ಪ್ರಸ್ತುತ ಇರುವುದಿಲ್ಲ.<br><br>ಮುಂದುವರೆದು, ಸದರಿ ಗ್ರಾಮಗಳಲ್ಲಿ ಉಚಿತವಾಗಿ ನಿವೇಶನ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯು ಅನುದಾನ ದೊರೆತಲ್ಲಿ ಮುಂದಿನ ದಿನಗಳಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು ಬಸ್ ನಿಲ್ದಾಣಗಳನ್ನು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳುವುದು. |
| ಈ. | ಇದ್ದರೆ, ಕಾಮಗಾರಿ ಯಾವಾಗ ಆರಂಭವಾಗುವುದು; ನಿರ್ಮಾಣದ ವೆಚ್ಚವೆಷ್ಟು? | |

**ಟಿಡಿ 13 ಟಿಡಿಕ್ಯೂ 2025**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು